ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಸದಸ್ಯರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ    ದಿನಾಂಕ : DATE : 20/9/2020

# ಶಾಸಕಿ ರೂಪಕಲಾ ಮಳೆಯಲ್ಲೇ 3 ಗಂಟೆ ಏಕಾಂಗಿ ಪ್ರತಿಭಟನೆ

## ರಸ್ತೆ ಅಗಲೀಕರಣಕ್ಕೆ ಒತ್ತಾಯಿಸಿ ಧರಣಿ



ಮಳೆಯಲ್ಲೇ ತೊಯ್ದು ಡಿಸಿ ಕಚೇರಿ ಮುಂದೆ ಪ್ರತಿಭಟನೆ ನಡೆಸಿದ ಶಾಸಕಿ ರೂಪಕಲಾ.

**ಕೋಲಾರ:** ಕೆಜಿಎಫ್ ಶಾಸಕಿ ರೂಪಕಲಾ ಅವರು ನಗರದ ಜಿಲ್ಲಾಧಿಕಾರಿ ಕಚೇರಿ ಮುಂದೆ ಸತತ ಮೂರೂವರೆ ಗಂಟೆಗಳ ಕಾಲ ಮಳೆಯಲ್ಲೇ ನಿಂತು ಪ್ರತಿಭಟನೆ ನಡೆಸಿದ ಪ್ರಸಂಗ ಶನಿವಾರ ನಡೆದಿದೆ. ಕೆಜಿಎಫ್ ನಗರದಲ್ಲಿರುವ ಅಶೋಕ ರಸ್ತೆಯನ್ನು ತುರ್ತಾಗಿ ಅಗಲೀಕರಣಕ್ಕೇ ಹೈಕೋರ್ಟ್‌ನಲ್ಲಿ ಆದೇಶವಾಗಿದ್ದರೂ ಜಿಲ್ಲಾಡಳಿತ ಕ್ರಮ ತೆಗೆದುಕೊಳ್ಳುತ್ತಿಲ್ಲ ಎಂದು ಆರೋಪಿಸಿ ಅವರು 10.30ಕ್ಕೆ ಏಕಾಂಗಿ ಮೌನ ಪ್ರತಿಭಟನೆ ಆರಂಭಿಸಿದ್ದರು. ಆದರೆ ಜಿಲ್ಲಾಧಿಕಾರಿ ಸಿ. ಸತ್ಯಭಾಮ ಮ.2.30ವರೆಗೂ ಸ್ಥಳಕ್ಕಾಗಮಿಸದ್ದರಿಂದ ರೂಪಕಲಾ ಮಳೆಯಲ್ಲೇ ಪ್ರತಿಭಟನೆ ಮುಂದುವರಿಸಬೇಕಾಯ್ತು.

ಅಶೋಕ ರಸ್ತೆಯ ಅಗಲೀಕರಣಕ್ಕಾಗಿ ಬಹಳ ಸಲ ಜಿಲ್ಲಾಧಿಕಾರಿಗೆ ಮನವಿ ಮಾಡಿದ್ದರೂ ಕ್ರಮ ಜರುಗಿಸಿಲ್ಲ. ಕಾಮಗಾರಿ ಶುರುವಾಗುವ ನಿರ್ದಿಷ್ಟ ದಿನಾಂಕವನ್ನು ಜಿಲ್ಲಾಧಿಕಾರಿ ಸ್ಪಷ್ಟಪಡಿಸದಿದ್ದರೆ ಹೋರಾಟ ನಿಲ್ಲುವುದಿಲ್ಲ ಅಂತ ಶಾಸಕಿ ರೂಪಕಲಾ ಗುಡುಗಿದ್ದರು. ಕೋಲಾರದಲ್ಲಿಯೇ ಇದ್ದ ಜಿಲ್ಲಾಧಿಕಾರಿ ಸತ್ಯಭಾಮ ಮಧ್ಯಾಹ್ನ 2 ಗಂಟೆ ಬಳಿಕ ಸ್ಥಳಕ್ಕೆ ಆಗಮಿಸಿದರು. ಅಧಿವೇಶನ ಮುಗಿದ ನಂತರ ಕಾಮಗಾರಿ ಮಾಡುವುದಾಗಿ ಡೀಸಿ ಭರವಸೆ ನೀಡಿದ ಬಳಿಕ ಧರಣಿ ವಾಪಸ್ ಪಡೆದು ಸ್ಥಳದಿಂದ ನಿರ್ಗಮಿಸಿದರು.